# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಡಾ॥ ಜಯರಾಂ.ಎಂ.ಚವ್ಹಾಣ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಇಂಡಿ ಇವರ ವಿರುದ್ಧದ ಇಲಾಖಾ ವಿಚಾರಣೆ

**ಓದಲಾಗಿದೆ:-** 1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಿಜಾಪುರ ಇವರ ಪತ್ರ ಸಂಖ್ಯೆ:ಜಿಪಂಅ/ಸಿಬ್ಬಂದಿ-1/ಸಿ.ಆರ್-47/2013-14/23857 ದಿನಾಂಕ: 29-10-2013.

2. ಸರ್ಕಾರದ ಸಮ ಸಂಖ್ಯೆಯ ಕಾರಣ ಕೇಳುವ ನೋಟೀಸ್ ದಿನಾಂಕ:04.01.2014

3. ಡಾ॥ ಜಯರಾಂ ಎಂ ಚವ್ಹಾಣ್, ರವರ ಲಿಖಿತ ಹೇಳಿಕೆ ದಿ:03.02.2014

****

**ಪ್ರಸ್ತಾವನೆ:**

ಡಾ॥ ಜಯರಾಂ.ಎಂ.ಚವ್ಹಾಣ್, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಇಂಡಿ ಬಿಜಾಪುರ ಜಿಲ್ಲೆ (ಪ್ರಸ್ತುತ ಸಹಾಯಕ ನಿರ್ದೇಶಕರು ಪಶು ಆಸ್ಪತ್ರೆ ಕುಷ್ಟಗಿ) ಇವರ ಇವರ ವಿರುದ್ಧ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 12(1)(ಎ)ರ ಪ್ರಕಾರ ಮೇಲೆ (2)ರಲ್ಲಿ ಓದಲಾದ ದಿನಾಂಕ:04.01.2014 ರಂದು ಕಾರಣ ಕೇಳುವ ನೋಟೀಸಿನೊಂದಿಗೆ ಈ ಕೆಳಕಂಡ ದೋಷಾರೋಪಣೆಗಳನ್ನು ಜಾರಿಮಾಡಿ ರಕ್ಷಣಾ ಹೇಳಿಕೆಯನ್ನು ಸಲ್ಲಿಸಲು ಡಾ॥ ಜಯರಾಂ. ಎಂ.ಚವ್ಹಾಣ್ ರವರಿಗೆ ಸೂಚಿಸಲಾಗಿತ್ತು.

I. 2012-13ನೇ ಸಾಲಿನಲ್ಲಿ ಎಂ.ಜಿ.ಎನ್.ಆರ್.ಇ.ಜಿ.ಎ. ರ ನಿಯಮಗಳನ್ನು ಉಲ್ಲಂಘಿಸಿ 7345.62 ಲಕ್ಷಗಳ ಹೆಚ್ಚಿನ ಮೊತ್ತದ ವಿವರಗಳನ್ನು ಎಂ.ಐ.ಎಸ್.ನಲ್ಲಿ ಅಳವಡಿಸಿರುತ್ತಾರೆ.

II. 2012-13ನೇ ಸಾಲಿನಲ್ಲಿ ಎಂ.ಜಿ.ಎನ್.ಆರ್.ಇ.ಜಿ.ಎ. ರಡಿಯಲ್ಲಿ ತಮ್ಮ ಹಂತದಲ್ಲಿಯೇ ರೂ.1077.05ಲಕ್ಷಗಳ ಹೆಚ್ಚುವರಿ ಕ್ರಿಯಾಯೋಜನೆಗಳನ್ನು ಮಂಜೂರಿಸಿದ್ದು, ಇವುಗಳ ಪೈಕಿ 1031.641 ಲಕ್ಷಗಳ ಮೊತ್ತವನ್ನು - ಎಂ.ಐ.ಎಸ್.ನಲ್ಲಿ ಅಳವಡಿಸಿರುತ್ತಾರೆ.

ಡಾ॥ ಜಯರಾಂ.ಎಂ.ಚವ್ಹಾಣ್ ಇವರು ಕಾರಣ ಕೇಳುವ ನೋಟೀಸ್‌ಗೆ ತಮ್ಮ ರಕ್ಷಣಾ ಹೇಳಿಕೆಯನ್ನು/ಸಮಜಾಯಿಷಿಯನ್ನು ಮೇಲೆ(3)ರಲ್ಲಿ ಓದಲಾದ ದಿನಾಂಕ: 03-02-2014 ರಂದು ಸಲ್ಲಿಸಿ, ತಮ್ಮ ಮೇಲಿನ ಆಪಾದನೆಗಳನ್ನು ಅಲ್ಲಗಳೆಯುತ್ತಾ, ಪ್ರಕರಣವನ್ನು ಮುಕ್ತಾಯಮಾಡುವಂತೆ ಕೋರಿರುತ್ತಾರೆ. ಅಧಿಕಾರಿಯು ನೀಡಿರುವ ರಕ್ಷಣಾ ಹೇಳಿಕೆಯಲ್ಲಿ ಈ ಕೆಳಕಂಡಂತೆ ಸಲ್ಲಿಸಿರುತ್ತಾರೆ.

**I. ಆರೋಪ:-1.**

1. ಮಹಾತ್ಮಾಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯಡಿ 2012-13ನೇ ಸಾಲಿನಲ್ಲಿ ಇಂಡಿ ತಾಲ್ಲೂಕಿನ 44 ಗ್ರಾಮ ಪಂಚಾಯತಿಗಳಿಗೆ ಒಟ್ಟು 3805.50 ಲಕ್ಷ ರೂ.ಗಳ ಕಾರ್ಮಿಕ ಮುಂಗಡ ಪತ್ರದಂತೆ ತಯಾರಿಸಿದ ಕ್ರಿಯಾ ಯೋಜನೆಗಳನ್ನು ಅನುಮೋದನೆ ನೀಡಿದ ನಂತರ ಹೆಚ್ಚುವರಿಯಾಗಿ ಜಿಲ್ಲಾ ಪಂಚಾಯತ ಬಿಜಾಪೂರ ಇಲ್ಲಿಂದ ಪತ್ರ ಸಂ:ಜಿಪಂ.ಅ:ಉಖಾಯೋ:ಸಿಆರ್-4/2012-13 ದಿನಾಂಕ: 21-02-2013, 23-02-2013, 25-02-2013, 27-02-2013, ಹಾಗೂ 01-03-2013, 02-03-2013, 04-03-2013, 06-03-2013 ಗಳ ಪ್ರಕಾರ ಒಟ್ಟು 14 ಗ್ರಾಮ ಪಂಚಾಯತಿಗಳಿಗೆ ರೂ. 322.29 ಲಕ್ಷಗಳಿಗೆ ಆರ್ಥಿಕ ಗುರಿ ನಿಗದಿಪಡಿಸಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಕ್ರಿಯಾ ಯೋಜನೆಗಳಿಗೆ ಜಿಲ್ಲಾ ಪಂಚಾಯತಿಯಿಂದ ಅನುಮೋದನೆ ಪಡೆಯಲಾಗಿದೆ. ಇನ್ನುಳಿದ 18 ಗ್ರಾಮ ಪಂಚಾಯತಿಗಳಲ್ಲಿ ಜಿಲ್ಲಾ ಪಂಚಾಯತಿಯಿಂದ ಅನುಮೋದನೆ ಪಡೆಯದೇ ಗ್ರಾಮ ಪಂಚಾಯತ ಹಂತದಲ್ಲಿ ಕಾಮಗಾರಿಗಳನ್ನು ಅನುಷ್ಠಾನಗೊಳಿಸಿ ರೂ. 734.62 ಲಕ್ಷಗಳನ್ನು ಎಂಐಎಸ್ ನಲ್ಲಿ ಅಳವಡಿಸಿದ್ದು ಸಂಬಂಧಪಟ್ಟ 18 ಗ್ರಾಮ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ತಾಲ್ಲೂಕು ಪಂಚಾಯತಿ ಇಂಡಿ ಕಾರ್ಯಾಲಯದ ಪತ್ರಗಳ ಸಂಖ್ಯೆ: ತಾಪಂ/ಉಖಾಯೋ/ಗ್ರಾಪಂ ದಿನಾಂಕ: 08-02-2013 ಮತ್ತು ತಾಪಂ/ಉಖಾಯೋ 2012-13/ಹೆಕ್ರಿಯೋ/ಅ2013-14 ದಿನಾಂಕ:01-04-2013 ರಂತೆ ಹೆಚ್ಚುವರಿಯಾಗಿ ಜಿಲ್ಲಾ ಪಂಚಾಯತಿಯಿಂದ ಅನುಮೋದನೆ ಪಡೆಯದೇ ಇದ್ದ ಕಾಮಗಾರಿಗಳ ಕೂಲಿ ಮತ್ತು ಸಾಮಗ್ರಿ ಮೊತ್ತವನ್ನು ಪಾವತಿಸಬಾರದೆಂದು ಕಟ್ಟುನಿಟ್ಟಾಗಿ ನಿರ್ದೇಶನ ನೀಡಲಾಗಿರುತ್ತದೆ.

2. ಎಂಐಎಸ್ ನಲ್ಲಿ ಅಳವಡಿಸಿದ ಕಾಮಗಾರಿಗಳು ಪೂರ್ಣಗೊಂಡ ಬಗ್ಗೆ ಖಚಿತಪಡಿಸಿಕೊಂಡು ಮಾಹಿತಿ ಸಲ್ಲಿಸಲು, ಮತ್ತು ಅಪೂರ್ಣ ಕಾಮಗಾರಿಗಳ ವಿವರಗಳನ್ನು ಎಂ.ಐ.ಎಸ್. ನಿಂದ ತೆಗೆದುಹಾಕಲು ಪಂಚಾಯತ ಅಭಿವೃದ್ಧಿ ಅಧಿಕಾರಿ/ಕಾರ್ಯದರ್ಶಿಗಳಿಗೆ ಮಾಸಿಕ ಸಭೆಯಲ್ಲಿ ತಿಳಿಸಲಾಗಿರುತ್ತದೆ.

3. ಸರಕಾರ ಮತ್ತು ಜಿಲ್ಲಾ ಪಂಚಾಯತಿಯಿಂದ ನೀಡಿದ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲನೆ ಮಾಡಲು ಹಾಗೂ ಪರಿಣಾಮಕಾರಿಯಾಗಿ ಹಾಗೂ ಪಾರದರ್ಶಕವಾಗಿ ಅನುಷ್ಠಾನ ಮಾಡಲು ಮತ್ತು ಜಿಲ್ಲಾ ಪಂಚಾಯತಿಯಿಂದ ಅನುಮೋಧನೆಗೊಂಡ ಕ್ರಿಯಾ ಯೋಜನೆಗಳಲ್ಲಿನ ಕಾಮಗಾರಿಗಳನ್ನು ಮಾತ್ರ ಎಂಐಎಸ್ ನಲ್ಲಿ ಅಳವಡಿಸಲು ಪಂಚಾಯತ ಅಭಿವೃದ್ಧಿ ಅಧಿಕಾರಿ/ಕಾರ್ಯದರ್ಶಿಗಳಿಗೆ ತಿಳಿಸಲಾಗಿರುತ್ತದೆ.

4. ಜಿಲ್ಲಾ ಪಂಚಾಯತಿಯಿಂದ ಅನುಮೋದನೆಗೊಂಡ 3 ಕ್ರಿಯಾ ಯೋಜನೆಗಳಲ್ಲಿನ ಕಾಮಗಾರಿಗಳನ್ನು ಎಂಐಎಸ್ ನಲ್ಲಿ ಅಳವಡಿಸುವುದು ಆಯಾ ಗ್ರಾಮ ಪಂಚಾಯತಿಯ ಪಂಚಾಯತ ಅಭಿವೃದ್ಧಿ ಅಧಿಕಾರಿ/ಕಾರ್ಯದರ್ಶಿಗಳ ಕರ್ತವ್ಯವಾಗಿರುತ್ತದೆ. ಹೆಚ್ಚುವರಿ ಕ್ರಿಯಾ ಯೋಜನೆಯನ್ನು ಅನುಮೋದನೆ ಪಡೆಯಲು ಪಂಚಾಯತ ಅಭಿವೃದ್ಧಿ ಅಧಿಕಾರಿ/ಕಾರ್ಯದರ್ಶಿಗಳಿಗೆ ಪದೇ ಪದೇ ಸೂಚಿಸಿದಾಗ್ಯೂ ಸದರಿ ವಿಷಯದಲ್ಲಿ ನಿರ್ಲಕ್ಷ್ಯ ವಹಿಸಿರುತ್ತಾರೆ.

ಬಾಳ್ಳೆಗಾರ

## *II. ಆರೋಪ:-2*

1. 2012-13ನೇ ಸಾಲಿನ ಹೆಚ್ಚುವರಿ ಕ್ರಿಯಾ ಯೋಜನೆಗೆ ಸಂಬಂಧಿಸಿದಂತೆ ಸದರಿ 18 ಗ್ರಾಮ ಪಂಚಾಯತಿಗಳಲ್ಲಿ ಕೂಲಿಕಾರರ ಕೆಲಸದ ಬೇಡಿಕೆ ಹೆಚ್ಚಿಗೆ ಬಂದಿರುವ ಪ್ರಯುಕ್ತ ತ್ವರಿತವಾಗಿ ಕೂಲಿಕಾರರಿಗೆ ಕೆಲಸ ನೀಡುವ ಸಂಬಂಧ ಸಂಬಂಧಿಸಿದ ಗ್ರಾಮ ಪಂಚಾಯತಗಳ ಹೆಚ್ಚುವರಿ ಕ್ರಿಯಾ ಯೋಜನೆಯನ್ನು ಗ್ರಾಮ ಸಭೆಯಲ್ಲಿ ಅನುಮೋದನೆ ಪಡೆದು ಪಂಚಾಯತ ಅಭಿವೃದ್ಧಿ ಅಧಿಕಾರಿ/ಕಾರ್ಯದರ್ಶಿಗಳು ಪಂಚಾಯತ ಅಧ್ಯಕ್ಷರ ಅನುಮೋದನೆಯೊಂದಿಗೆ ನನ್ನ ಕಛೇರಿಗೆ ಸಲ್ಲಿಸಿದ್ದು, ಸದರಿ ಕ್ರಿಯ ಯೋಜನೆಗಳನ್ನು ಜಿಲ್ಲಾ ಪಂಚಾಯತಿಯಿಂದ ಘಟನೋತ್ತರ ಮಂಜೂರಾತಿ ಪಡೆಯಲು ಪಂಚಾಯತ ಅಭಿವೃದ್ಧಿ ಅಧಿಕಾರಿ/ಕಾರ್ಯದರ್ಶಿಗಳಿಗೆ ತಿಳಿಸಲಾಗಿತ್ತು.

2. ಜಿಲ್ಲಾ ಪಂಚಾಯತಿಯಿಂದ ಅನುಮೋದನೆಯಾದ ನಂತರವೇ ಕಾಮಗಾರಿದಳ ಆದೇಶ ಮತ್ತು ಎಂಐಎಸ್ ನಲ್ಲಿ ಅಳವಡಿಸಲು ಕಟ್ಟುನಿಟ್ಟಾಗಿ ಸೂಚನೆ ನೀಡಲಾಗಿತ್ತು. ಇಂಡಿ ತಾಲ್ಲೂಕು ಅತೀ ಹಿಂದುಳಿದ ಪ್ರದೇಶವಾಗಿದ್ದು, ತೀವ್ರ ಬರಗಾಲದಿಂದ ತತ್ತರಿಸಿದ ಕೂಲಿ ಕಾರ್ಮಿಕರು ಗುಳೆ ಹೋಗುವುದನ್ನು ತಪ್ಪಿಸಲು ಮತ್ತು ಒಂದು ಕುಟುಂಬಕ್ಕೆ ವಾರ್ಷಿಕವಾಗಿ 100 ಮಾನವ ದಿನಗಳಿಂದ 150 ಮಾನವ ದಿನಗಳಿಗೆ ಹೆಚ್ಚಿಸಿ ಸರಕಾರವು ಆದೇಶಿಸಿರುವುದರಿಂದ ಹೆಚ್ಚಿನ ಮೊತ್ತದ ಕ್ರಿಯಾ ಯೋಜನೆ ಬೇಡಿಕೆ ಹೆಚ್ಚಿಗೆಯಾಗಿರುವುದರ ಪ್ರಯುಕ್ತ ರೂ. 1031.641 ಲಕ್ಷ ಮೊತ್ತ ಎಂಐಎಸ್ ನಲ್ಲಿ ಹೆಚ್ಚಿಗೆಯಾಗಿರುತ್ತದೆ.

3. ಈ ಯೋಜನೆಯನ್ನು ನಿಯಮಾನುಸಾರ ಸಮರ್ಪಕವಾಗಿ ಹಾಗೂ ಪಾರದರ್ಶಕವಾಗಿ ಅನುಷ್ಠಾನಗೊಳಿಸಲು ಪಂಚಾಯತ ಅಭಿವೃದ್ಧಿ ಅಧಿಕಾರಿ/ಕಾರ್ಯದರ್ಶಿಗಳಿಗೆ ಮೇಲಿಂದ ಮೇಲೆ ಸೂಚನೆಗಳನ್ನು ನೀಡಲಾಗಿರುತ್ತದೆ. ಸಂಬಂಧಪಟ್ಟ ಅಭಿವೃದಿ ಅಧಿಕಾರಿ/ಕಾರ್ಯದರ್ಶಿಗಳಿಗೆ ಮೇಲಿಂದ ಮೇಲೆ ಸೂಚನೆಗಳನ್ನು ನೀಡಲಾಗಿರುತ್ತದೆ. ಸಂಬಂಧಪಟ್ಟ ಪಂಚಾಯತ ಅಭಿವೃದ್ಧಿ ಅಧಿಕಾರಿ/ಕಾರ್ಯದರ್ಶಿಗಳು ಯೋಜನೆಯನ್ನು ಅನುಷ್ಠಾನಗೊಳಿಸುವುದು, ಹೆಚ್ಚುವರಿ ಕ್ರಿಯಾ ಯೋಜನೆಗಳಿಗೆ ಸಮಕ್ಷಮ ಪ್ರಾಧಿಕಾರದಿಂದ ಅನುಮೋದನೆ ಪಡೆಯುವುದು ಹಾಗೂ ಅನುಮೋದನೆಯ ನಂತರ ಎಂಐಎಸ್ ನಲ್ಲಿ ಅಳವಡಿಸುವುದು ಅವರ ಆದ್ಯ ಕರ್ತವ್ಯವಾಗಿರುತ್ತದೆ

ರಕ್ಷಣಾ ಹೇಳಿಕೆಯನ್ನು ವಿವರವಾಗಿ ಪರಿಶೀಲಿಸಿದ್ದು, ಆಪಾದಿತರ ಹೇಳಿಕೆಯ ಪ್ರಕಾರವೇ ಹೆಚ್ಚುವರಿ ಕ್ರಿಯಾ ಯೋಜನೆಗೆ ಪೂರ್ವಾನುಮೋದನೆ ಪಡೆಯದೆ ಇರುವುದು, ನಂತರ ಘಟನೋತ್ತರ ಅನುಮೋದನೆ ಪಡೆಯಲು ಕೆಲ ಸಿಬ್ಬಂದಿಗೆ ತಿಳಿಸಿರುವುದು, ಇದಲ್ಲದೇ ಕೆಲವು ಕ್ರಿಯಾಯೋಜನೆಗಳಿಗೆ ಸಂಬಂಧಿಸಿದಂತೆ ಕಾಮಗಾರಿ ವಿವರಗಳನ್ನು ಎಂ.ಐ.ಎಸ್.ನಲ್ಲಿ ಅಳವಡಿಸುವುದು ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಜವಬ್ದಾರಿಯಾಗಿರುತ್ತದೆಂದು ತಿಳಿಸಿರುತ್ತಾರೆ. ಇದರಿಂದಾಗಿ ಸಹ ಇವರ ಜವಬ್ದಾರಿಯನ್ನು ಸಹ ಇವರು ನಿರ್ವಹಿಸದಿರುವುದು ವೇದ್ಯವಾಗುತ್ತದೆ.

ಆದುದರಿಂದ ಸದರಿಯವರ ವಿರುದ್ಧದ ಕರ್ತವ್ಯ ಲೋಪದ ಆರೋಪಗಳು ಸಾಬೀತಾಗಿವೆಯೆಂದು ಸರ್ಕಾರವು ನಿರ್ಣಯಿಸಿದೆ. ಈ ಹಿನ್ನೆಲೆಯಲ್ಲಿ ಡಾ॥ ಜಯರಾಂ. ಎಂ. ಚವ್ಹಾಣ್, ರವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ, ಮತ್ತು ಮೇಲ್ಮನವಿ)ನಿಯಮಾವಳಿಗಳು-1957ರ ನಿಯಮ-8(iii) ರಲ್ಲಿ ನಿರ್ದಿಷ್ಟಪಡಿಸಿರುವಂತೆ ಅವರ ಮುಂದಿನ ಒಂದು **"ವಾರ್ಷಿಕ ವೇತನ ಬಡ್ತಿಯನ್ನು ಸಂಚಿತ ಪರಿಣಾಮ ರಹಿತವಾಗಿ ತಡೆಹಿಡಿಯುವ"** ದಂಡನೆಯನ್ನು ವಿಧಿಸಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 137 ಪಬವ 2013 ಬೆಂಗಳೂರು ದಿನಾಂಕ:21-03-2014</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ, ಸರ್ಕಾರವು ಬಿಜಾಪುರ ಜಿಲ್ಲೆ ಇಂಡಿ ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿಯಾಗಿ ನಿಯೋಜನೆ ಮೇಲೆ ಕರ್ತವ್ಯನಿರ್ವಹಿಸುತ್ತಿದ್ದ ಡಾ॥ ಜಯರಾಂ.ಎಂ.ಚವ್ಹಾಣ್, ಪ್ರಸ್ತುತ ಸಹಾಯಕ ನಿರ್ದೇಶಕರು ಪಶು ಆಸ್ಪತ್ರೆ ಕುಷ್ಟಗಿ, ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು-1957ರ ನಿಯಮ-8(iii) ರ ಪ್ರಕಾರ ಅವರ, ಮುಂದಿನ **"ಒಂದು ವಾರ್ಷಿಕ ವೇತನ ಬಡ್ತಿಯನ್ನು ಒಂದು ವರ್ಷದ ಅವಧಿಗೆ ಸಂಚಿತ ಪರಿಣಾಮ ರಹಿತವಾಗಿ ತಡೆಹಿಡಿಯುವ"** ದಂಡನೆಯನ್ನು ಈ ಮೂಲಕ ವಿಧಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ-

(ಚಂದ್ರಶೇಖರ್)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಬಿ&ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**<u>ಇವರಿಗೆ,</u>**

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಪಶು ಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ ವಿಕಾಸಸೌಧ, ಬೆಂಗಳೂರು -01.
3. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬಿಜಾಪುರ ಮತ್ತು ಕೊಪ್ಪಳ
4. ಸಂಬಂಧಿಸಿದ ಅಧಿಕಾರಿಗೆ.

**<u>ಪ್ರತಿ ಮಾಹಿತಿಗಾಗಿ:</u>**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ಕಾರ್ಯದರ್ಶಿ(ಪಂ.ರಾಜ್)/ಅಪರ ಕಾರ್ಯದರ್ಶಿ (ಆಡಳಿತ) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
3. ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
4. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.